# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 966 |
| ಸದಸ್ಯರ ಹೆಸರು | : ಶ್ರೀ ಆರ್. ಪ್ರಸನ್ನ ಕುಮಾರ್ |
| ಉತ್ತರಿಸುವ ದಿನಾಂಕ | : 13.03.2020 |
| ಉತ್ತರಿಸುವ ಸಚಿವರು | : ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2017–2018, 2018–19 ಮತ್ತು 2019–20ನೇ ಸಾಲಿನಲ್ಲಿ ರಾಜ್ಯದಲ್ಲಿ ಅಂಗವಿಕಲ/ವಿಕಲಚೇತನ ಹೊಂದಿರುವ ಮಕ್ಕಳನ್ನು ಗುರುತಿಸುವ ಕಾರ್ಯ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಮಕ್ಕಳನ್ನು ಗುರುತಿಸಲಾಗಿದೆ; (ಮಾಹಿತಿ ನೀಡುವುದು) | 2017–2018, 2018–19 ಮತ್ತು 2019–20ನೇ ಸಾಲಿನಲ್ಲಿ ರಾಜ್ಯದಲ್ಲಿ ಅಂಗವಿಕಲ/ವಿಕಲಚೇತನ ಹೊಂದಿರುವ ಮಕ್ಕಳನ್ನು ಗುರುತಿಸುವ ಕಾರ್ಯ ಕೈಗೊಂಡಿರುವುದಿಲ್ಲ. |
| ಆ) | ಅಂಗವಿಕಲ/ವಿಕಲಚೇತನ ಹೊಂದಿರುವ ಮಕ್ಕಳನ್ನು ಮುಖ್ಯವಾಹಿನಿಗೆ ತಂದು ಶಿಕ್ಷಣ ನೀಡಲು ಸರ್ಕಾರ ಹಮ್ಮಿಕೊಂಡಿರುವ ಕಾರ್ಯಕ್ರಮಗಳೇನು; | ಶ್ರವಣದೋಷವುಳ್ಳ, ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು, ಸರ್ಕಾರಿ ಅನುದಾನಿತ ಶಾಲೆಗಳು, ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. |
| ಇ) | ಅಂತಹ ಮಕ್ಕಳನ್ನು ಶಾಲೆಗೆ ದಾಖಲು ಮಾಡಿದ್ದಲ್ಲಿ ಅವರುಗಳಿಗೆ ಪ್ರಸ್ತುತ ನೀಡಲಾಗುತ್ತಿರುವ ಸೌಲಭ್ಯಗಳೇನು; | ಪ್ರಸ್ತುತ ನೀಡಲಾಗುತ್ತಿರುವ ಸೌಲಭ್ಯಗಳ ಮಾಹಿತಿಯನ್ನು ಅನುಬಂಧ–1ರಲ್ಲಿ ಒದಗಿಸಿದೆ. |
| ಈ) | ಪ್ರಸ್ತುತ ಸಾಲಿಗೆ ಅನುದಾನ ಬಿಡುಗಡೆಯಾಗಿದೆಯೇ: (ತಾಲ್ಲೂಕುವಾರು ಮಾಹಿತಿ ನೀಡುವುದು) | ಇಲಾಖೆಯಲ್ಲಿ ಜಿಲ್ಲಾವಾರು ಅನುದಾನ ಬಿಡುಗಡೆಯಾಗುತ್ತಿದೆ. ಜಿಲ್ಲಾವಾರು ಮಾಹಿತಿಯನ್ನು ಅನುಬಂಧ–2ರಲ್ಲಿ ಒದಗಿಸಿದೆ. |
| ಉ) | ಅಂಗವಿಕಲ/ವಿಕಲಚೇತನ ಹೊಂದಿರುವ ಮಕ್ಕಳಿಗೆ ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳು ಯಾವುವು; ಇವುಗಳನ್ನು ಮಕ್ಕಳಿಗೆ ತಲುಪಿಸಲು ಸರ್ಕಾರ ಯಾವ ರೀತಿಯ ಯೋಜನೆಗಳನ್ನು ಹಮ್ಮಿಕೊಂಡಿದೆ; | ಶ್ರವಣದೋಷವುಳ್ಳ, ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು, ಸರ್ಕಾರಿ ಅನುದಾನಿತ ಶಾಲೆಗಳು, ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆಯನ್ನು ಹಮ್ಮಿಕೊಳ್ಳಲಾಗಿದೆ. ಸರ್ಕಾರದಿಂದ ನೀಡಲಾಗುತ್ತಿರುವ ಸೌಲಭ್ಯಗಳನ್ನು ಅನುಬಂಧ–1ರಲ್ಲಿ ಒದಗಿಸಿದೆ. |
| ಊ) | ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಪ್ರತಿನಿತ್ಯದ ಆಹಾರವನ್ನು ಒದಗಿಸಲು ಬೇಕಾಗುವ ಆಹಾರ ಸಾಮಾಗ್ರಿಗಳನ್ನು ಆಯಾ ತಾಲ್ಲೂಕುಗಳಿಂದಲೇ ಕೊಳ್ಳುವ ಅವಕಾಶವನ್ನು ಈ ಹಿಂದೆ ನೀಡಿರುವುದು ನಿಜವೇ; | ಹೌದು.<br>ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳಿಗೆ ಒದಗಿಸಲಾಗುವ ಪೂರಕ ಪೌಷ್ಠಿಕ ಆಹಾರವನ್ನು ಇಲಾಖಾ ವತಿಯಿಂದ ಪ್ರತಿ ಜಿಲ್ಲೆಗಳಲ್ಲಿ ಸ್ಥಾಪಿಸಲಾಗಿರುವ ಮಹಿಳಾ ಪೂರಕ ಪೌಷ್ಠಿಕ ಆಹಾರ ಉತ್ಪಾದನಾ ಮತ್ತು ತರಬೇತಿ ಕೇಂದ್ರಗಳು (ಎಂ.ಎಸ್.ಪಿ.ಟಿ.ಸಿ.) ಸ್ಥಳೀಯವಾಗಿ ಆಹಾರ ಪದಾರ್ಥಗಳನ್ನು ಖರೀದಿಸಲು ತಿಳಿಸಲಾಗಿದೆ. |

| | | |
|---|---|---|
| ಖ) | ರಾಜ್ಯದಲ್ಲಿರುವ ಅಂಗನವಾಡಿ ಕೇಂದ್ರಗಳ ಒಟ್ಟು ಸಂಖ್ಯೆ ಎಷ್ಟು; ಪ್ರಸ್ತುತ ಸದರಿ ವ್ಯವಸ್ಥೆಯನ್ನು ಬದಲಿಸಿ ಕೇಂದ್ರೀಕೃತ ವ್ಯವಸ್ಥೆ ಮಾಡಿರುವುದು ನಿಜವೇ: ಈ ರೀತಿ ಬದಲಾವಣೆ ಮಾಡಲು ಕಾರಣವೇನು? (ವಿವರ ನೀಡುವುದು) | ರಾಜ್ಯದಲ್ಲಿ 62,580 ಅಂಗನವಾಡಿ ಕೇಂದ್ರಗಳು ಹಾಗೂ 3,331 ಮಿನಿ ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.<br>ರಾಜ್ಯಾದ್ಯಂತ ಏಕರೂಪದ ಗುಣಮಟ್ಟದ ಆಹಾರ ಪದಾರ್ಥಗಳನ್ನು ಏಕರೂಪದ ಬೆಲೆಯಲ್ಲಿ ಸರಬರಾಜು ಮಾಡಲು ಬೇಳೆ ಮತ್ತು ಕಾಳುಗಳನ್ನು ಕರ್ನಾಟಕ ರಾಜ್ಯ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದಿಂದ ಉಳಿದ ಕಚ್ಚಾ ಆಹಾರ ಪದಾರ್ಥಗಳನ್ನು (ಅಕ್ಕಿ, ಗೋಧಿ ಮತ್ತು ಎಣ್ಣೆಯನ್ನು ಹೊರತುಪಡಿಸಿ) ಕರ್ನಾಟಕ ರಾಜ್ಯ ಸಹಕಾರ ಗ್ರಾಹಕರ ಮಹಾಮಂಡಳ ಇವರಿಂದ ಎಂ.ಎಸ್.ಪಿ.ಟಿ.ಸಿ.ಗಳು ಖರೀದಿಸಲು ಆದೇಶಿಸಲಾಗಿದೆ. ಸದರಿ ಆದೇಶದ ವಿರುದ್ಧ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣ ದಾಖಲಾಗಿದ್ದು, ಈ ಆದೇಶವನ್ನು ತಡೆಹಿಡಿದು, ನ್ಯಾಯಾಲಯ ಮಧ್ಯಂತರ ಆದೇಶ ನೀಡಿರುತ್ತದೆ. ಆದ್ದರಿಂದ ಪ್ರಸ್ತುತ ಆಹಾರ ಸಾಮಗ್ರಿಗಳನ್ನು ಎಂ.ಎಸ್.ಪಿ.ಟಿ.ಸಿ.ಗಳು ಹಿಂದಿನಂತೆ ಖರೀದಿಸುತ್ತಿವೆ. |

**ಸಂಖ್ಯೆ: ಮಮಇ 63 ಪಿಹೆಚ್‌ಪಿ 2020**

(ಶಶಿಕಲಾ ಅ. ಜೊಲ್ಲೆ)
ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ,
ವಿಕಲಚೇತನರ, ಹಿರಿಯ ನಾಗರಿಕರ ಸಬಲೀಕರಣ
ಇಲಾಖಾ ಸಚಿವರು

ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಆರ್. ಪ್ರಸನ್ನ ಕುಮಾರ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:966ಕ್ಕೆ ಅನುಬಂಧ-1

ಅಂಗವಿಕಲ/ವಿಕಲಚೇತನ ಮಕ್ಕಳ ಶಿಕ್ಷಣಕ್ಕಾಗಿ ಇಲಾಖೆಯು ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳು:

(ಎ) ಶೈಕ್ಷಣಿಕ:-

1. ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಇಲಾಖೆಯಡಿ ಶ್ರವಣದೋಷವುಳ್ಳ ಮಕ್ಕಳಿಗಾಗಿ ಬೆಂಗಳೂರು ನಗರ, ಮೈಸೂರು, ಕಲಬುರ್ಗಿ, ಬಳ್ಳಾರಿ, ಬೆಳಗಾವಿ ಜಿಲ್ಲೆಗಳಲ್ಲಿ 5 ಕಿವುಡು ಮಕ್ಕಳ ವಸತಿ ಶಾಲೆಗಳನ್ನು ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ಮಕ್ಕಳಿಗೆ ಉಚಿತ ವಸತಿ, ಊಟ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಪೈಕಿ ಶ್ರವಣದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ಬೆಳಗಾವಿಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

2. ಅಂಧ ಮಕ್ಕಳಿಗಾಗಿ ವಸತಿಯುತ ಶಾಲೆಗಳು:

ಇಲಾಖೆಯಡಿ 4 ಅಂಧ ಮಕ್ಕಳ ವಸತಿ ಶಾಲೆಗಳು ಕಲಬುರ್ಗಿ, ಮೈಸೂರು, ದಾವಣಗೆರೆ ಹಾಗೂ ಹುಬ್ಬಳ್ಳಿಯಲ್ಲಿ ನಡೆಸಲಾಗುತ್ತಿದೆ. ಈ ಶಾಲೆಗಳಲ್ಲಿ ದೃಷ್ಟಿದೋಷವುಳ್ಳ ಮಕ್ಕಳಿಗೆ ಉಚಿತ ಊಟ, ವಸತಿ ಮತ್ತು ಶಿಕ್ಷಣವನ್ನು ನೀಡಲಾಗುತ್ತಿದೆ. ಈ ಪೈಕಿ ದೃಷ್ಟಿದೋಷವುಳ್ಳ ಹೆಣ್ಣು ಮಕ್ಕಳಿಗಾಗಿ ದಾವಣಗೆರೆಯಲ್ಲಿ ಪ್ರತ್ಯೇಕ ವಸತಿ ಶಾಲೆ ಇರುತ್ತದೆ.

3. ಸರ್ಕಾರಿ ಅನುದಾನಿತ ಶಾಲೆಗಳು

(ಅ) 1982ರ ರಾಜ್ಯ ಅನುದಾನ ಸಂಹಿತೆಯಡಿ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಸ್ವಯಂ ಸೇವಾ ಸಂಸ್ಥೆಗಳ ಮೂಲಕ 34 ವಿಶೇಷ ಶಾಲೆ/ ತರಬೇತಿ ಕೇಂದ್ರಗಳನ್ನು ದೈಹಿಕ, ಅಂಧ, ಶ್ರವಣದೋಷ ಹಾಗೂ ಬುದ್ಧಿಮಾಂದ್ಯ ಮಕ್ಕಳಿಗಾಗಿ ನಡೆಸಲಾಗುತ್ತಿದೆ. ರಾಜ್ಯ ಸರ್ಕಾರದಿಂದ ಅನುದಾನವನ್ನು ಜಿಲ್ಲಾ ಪಂಚಾಯತ್ ಮೂಲಕ ಬಿಡುಗಡೆ ಮಾಡಲಾಗುತ್ತಿದೆ.

(ಆ)ಅಂಗವಿಕಲ ಮಕ್ಕಳ ಕೇಂದ್ರೀಕೃತ ವಿಶೇಷ ಶೈಕ್ಷಣಿಕ ಯೋಜನೆ:

ಈ ಯೋಜನೆಯಡಿ ಬುದ್ಧಿಮಾಂದ್ಯ (ಸೆರಬ್ರಲ್ ಪಾಲ್ಸಿ, ಆಟಿಸಂ), ದೃಷ್ಟಿದೋಷ, ಶ್ರವಣದೋಷವುಳ್ಳ ಮಕ್ಕಳಿಗಾಗಿ ವಸತಿಯುತ ಹಾಗೂ ವಸತಿರಹಿತ ಶಾಲೆಗಳು ಸೇರಿದಂತೆ ಒಟ್ಟು 133 ವಿಶೇಷ ಶಾಲೆಗಳು ಸ್ವಯಂ ಸೇವಾ ಸಂಸ್ಥೆಗಳ ಮೂಲಕ ನಡೆಯುತ್ತಿವೆ. ಮಕ್ಕಳ ಸಂಖ್ಯೆಗೆ ಅನುಗುಣವಾಗಿ ಶ್ರವಣದೋಷವುಳ್ಳ ಹಾಗೂ ದೃಷ್ಟಿದೋಷವುಳ್ಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6200/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.5200/- ರಂತೆ ಹಾಗೂ ಬುದ್ಧಿಮಾಂದ್ಯ ಮಕ್ಕಳ ಮಕ್ಕಳ ವಸತಿಯುತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ.6800/- ರಂತೆ ಹಾಗೂ ವಸತಿರಹಿತ ಶಾಲೆಯಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿ ಮಗುವಿನ ನಿರ್ವಹಣೆಗೆ ಮಾಹೆಯಾನ ತಲಾ ರೂ. 6000/- ರಂತೆ ವರ್ಷದಲ್ಲಿ 10 ತಿಂಗಳ ಅವಧಿಗೆ ಅನುದಾನವನ್ನು ಮಂಜೂರು ಮಾಡಲಾಗುತ್ತಿದೆ. ಈ ಅನುದಾನದಲ್ಲಿ ಶಿಕ್ಷಕರ ಗೌರವಧನ, ಮಕ್ಕಳ ಆಹಾರ ವೆಚ್ಚ, ಕಟ್ಟಡದ ಬಾಡಿಗೆ ಹಾಗೂ ನಿರ್ವಹಣಾ ವೆಚ್ಚ, ಸಮವಸ್ತ್ರ, ವೈದ್ಯಕೀಯ ವೆಚ್ಚ ಹಾಗೂ ಸಾದಿಲ್ವಾರು ವೆಚ್ಚಗಳು ಒಳಗೊಂಡಿರುತ್ತವೆ.

4. ವಿಕಲಚೇತನ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಹಾಗೂ ಪ್ರೋತ್ಸಾಹಧನ ಯೋಜನೆ:

ಈ ಕಾರ್ಯಕ್ರಮದಡಿ ಒಂದನೇ ತರಗತಿಯಿಂದ ವಿಶ್ವವಿದ್ಯಾನಿಲಯದ ಶಿಕ್ಷಣ ಮಟ್ಟದವರೆಗೆ ವ್ಯಾಸಂಗ ಮಾಡುತ್ತಿರುವ ಅರ್ಹ ವಿಕಲಚೇತನ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡಲಾಗುತ್ತಿದೆ. ಪಬ್ಲಿಕ್ ಪರೀಕ್ಷೆಗಳಲ್ಲಿ ಶೇ.60ಕ್ಕಿಂತ ಹೆಚ್ಚಿನ ಅಂಕ ಪಡೆದ ಪ್ರತಿಭಾನ್ವಿತ ವಿಕಲಚೇತನ ವಿದ್ಯಾರ್ಥಿಗಳಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದೆ.

..2

5. <u>ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ:</u>

ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ 2013–14ನೇ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ನಂತರ ಉನ್ನತ ಶಿಕ್ಷಣ, ವೃತ್ತಿ ಶಿಕ್ಷಣ, ತಾಂತ್ರಿಕ ಶಿಕ್ಷಣ, ಸ್ನಾತಕೋತ್ತರ, ಔದ್ಯೋಗಿಕ ಶಿಕ್ಷಣಗಳಿಗೆ ನಿಯಮಾನುಸಾರ ಆಯ್ಕೆಯಾಗುವ ವಿದ್ಯಾರ್ಥಿಗಳಿಗೆ ಸರ್ಕಾರವು ನಿಗದಿಪಡಿಸಿರುವ ಪರೀಕ್ಷಾ ಶುಲ್ಕ ಬೋಧನಾ ಶುಲ್ಕ, ಪ್ರಯೋಗಾಲಯ ಶುಲ್ಕ, ಕ್ರೀಡಾ ಶುಲ್ಕ ಹಾಗೂ ಗ್ರಂಥಾಲಯ ಶುಲ್ಕಗಳನ್ನು ಮರುಪಾವತಿಸುವ ಯೋಜನೆಯು ಜಾರಿಗೆ ಬಂದಿದ್ದು, ಈ ಯೋಜನೆಚುಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳಿಗೆ ಯಾವುದೇ ಆದಾಯಮಿತಿ ಇರುವುದಿಲ್ಲ,

6. ಅ<u>ಚಿಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್:</u>

ಎಸ್.ಎಸ್.ಎಲ್.ಸಿ. ಹಾಗೂ ನಚಿತರದ ವ್ಯಾಸಂಗ ಮಾಡುವ ದೃಷ್ಟಿದೋಷವುಳ್ಳ ವಿಕಲಚೇತನ ವಿದ್ಯಾರ್ಥಿಗಳು ಇತ್ತೀಚಿನ ತಂತ್ರಜ್ಞಾನ ಮತ್ತು ತಂತ್ರಾಂಶದ ಉಪಯೋಗದಿಂದ ಉನ್ನತ ಶಿಕ್ಷಣವನ್ನು ಪಡೆಯಲು ಅನುಕೂಲವಾಗುವಚಿತೆ ಮಾತನಾಡುವ (ಟಾಕಿಂಗ್) ಲ್ಯಾಪ್‌ಟಾಪ್‌ಗಳನ್ನು ನೀಡಲಾಗುತ್ತಿದೆ. (2019–20ನೇ ಅಚಿಧ ವಿದ್ಯಾರ್ಥಿಗಳಿಗೆ ಟಾಕಿಂಗ್ ಲ್ಯಾಪ್ ಟಾಪ್ ವಿತರಿಸಲಾಗುವುದು)

***

| ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಆರ್. ಪ್ರಸನ್ನ ಕುಮಾರ್ ಇವರ ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:966ಕ್ಕೆ ಅನುಬಂಧ-2 | | | | | |
|---|---|---|---|---|---|
| **2019-20ನೇ ಸಾಲಿನಲ್ಲಿ ಬಿಡುಗಡೆಯಾದ ಅನುದಾನದ ವಿವರ** | | | | | |
| (ರೂ.ಲಕ್ಷಗಳಲ್ಲಿ) | | | | | |
| ಕ್ರ.ಸಂ | ಜಿಲ್ಲೆಯ ಹೆಸರು | ಶಿಶುಕೇಂದ್ರೀಕೃತ ಯೋಜನೆ ಬಿಡುಗಡೆ | 1982 ರಾಜ್ಯ ಅನುದಾನ ಸಂಹಿತೆ ಬಿಡುಗಡೆ | ವಿಕಲಚೇತನ ವಿದ್ಯಾರ್ಥಿಗಳಿಗೆ ಶಿಷ್ಯವೇತನ ಹಾಗೂ ಪ್ರೋತ್ಸಾಹಧನ ಯೋಜನೆಯಡಿ ಬಿಡುಗಡೆ | ಉನ್ನತ ಶಿಕ್ಷಣ ಪಡೆಯುವ ವಿಕಲಚೇತನರಿಗೆ ಶುಲ್ಕ ಮರುಪಾವತಿ |
| 1 | ಬೆಂಗಳೂರು ನಗರ | 406.88 | 135.20 | 28.75 | 14.00 |
| 2 | ಬೆಂಗಳೂರು (ಗ್ರಾಮಾಂತರ) | 43.52 | 0.00 | 4.15 | 2.10 |
| 3 | ಬೆಳಗಾವಿ | 118.98 | 51.46 | 47.50 | 5.20 |
| 4 | ಬಳ್ಳಾರಿ | 42.86 | 0.00 | 14.00 | 5.00 |
| 5 | ಬೀದರ್ | 128.92 | 0.00 | 6.65 | 3.25 |
| 6 | ವಿಜಯಪುರ | 22.36 | 57.00 | 20.00 | 4.50 |
| 7 | ಬಾಗಲಕೋಟೆ | 130.32 | 0.00 | 14.75 | 4.30 |
| 8 | ಚಿತ್ರದುರ್ಗ | 44.12 | 36.00 | 21.50 | 2.77 |
| 9 | ಚಿಕ್ಕಮಗಳೂರು | 43.12 | 113.00 | 7.37 | 3.60 |
| 10 | ಚಾಮರಾಜನಗರ | 0.00 | 0.00 | 12.55 | 1.25 |
| 11 | ಧಾರವಾಡ | 158.55 | 71.75 | 25.00 | 13.00 |
| 12 | ದಕ್ಷಿಣ ಕನ್ನಡ | 107.57 | 1.10 | 37.10 | 6.00 |
| 13 | ದಾವಣಗೆರೆ | 220.68 | 0.00 | 26.50 | 6.82 |
| 14 | ಕಲಬುರಗಿ | 35.08 | 0.00 | 25.16 | 16.55 |
| 15 | ಗದಗ | 95.58 | 0.00 | 16.34 | 2.47 |
| 16 | ಹಸನ | 45.62 | 53.00 | 17.00 | 6.30 |
| 17 | ಹಾವೇರಿ | 276.22 | 93.00 | 22.50 | 6.75 |
| 18 | ಕೊಡಗು | 19.62 | 0.00 | 4.35 | 1.70 |
| 19 | ಕೋಲಾರ | 74.20 | 0.00 | 19.55 | 2.15 |
| 20 | ಕೊಪ್ಪಳ | 19.52 | 55.00 | 16.30 | 1.52 |
| 21 | ಮೈಸೂರು | 127.28 | 54.80 | 55.00 | 31.00 |
| 22 | ಮಂಡ್ಯ | 135.18 | 4.00 | 16.12 | 6.00 |
| 23 | ರಾಯಚೂರು | 27.44 | 0.00 | 11.58 | 8.00 |
| 24 | ಶಿವಮೊಗ್ಗ | 39.88 | 235.00 | 18.85 | 9.50 |
| 25 | ತುಮಕೂರು | 51.57 | 197.00 | 38.95 | 4.20 |
| 26 | ಉತ್ತರಕನ್ನಡ | 72.42 | 0.00 | 11.25 | 1.75 |
| 27 | ಉಡುಪಿ | 84.46 | 29.40 | 7.50 | 3.65 |
| 28 | ರಾಮನಗರ | 57.06 | 0.00 | 12.15 | 1.75 |
| 29 | ಚಿಕ್ಕಬಳ್ಳಾಪುರ | 23.94 | 0.00 | 6.40 | 1.60 |
| 30 | ಯಾದಗಿರಿ | 0.00 | 0.00 | 7.82 | 4.50 |
| ಒಟ್ಟು | | **2652.95** | **1186.71** | **572.64** | **181.18** |